# ಹೊರಟ್ಟಿ ಜೆಡಿಎಸ್ ಅಭ್ಯರ್ಥಿ

ಸಂ.ಕ.ಸಮಾಚಾರ, ಬೆಂಗಳೂರು



**ಸಭಾಪತಿ ಚುನಾವಣೆ**

ಜೆಡಿಎಸ್ ಹಿರಿಯ ಮುಖಂಡ ಬಸವರಾಜ ಹೊರಟ್ಟಿ ಅವರಿಗೆ ಮೇಲ್ಮನೆಯ ಸಭಾಪತಿ ಸ್ಥಾನ ಬಿಟ್ಟುಕೊಡಬೇಕೆಂದು ಆಡಳಿತಾರೂಢ ಬಿಜೆಪಿ ಪಕ್ಷವನ್ನು ಕೋರಲು ಜೆಡಿಎಸ್ ನಿರ್ಧರಿಸಿದೆ.

ಮಂಗಳವಾರ ಜೆಡಿಎಸ್ ವರಿಷ್ಠ ಹಾಗೂ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರ ಅಧ್ಯಕ್ಷತೆಯಲ್ಲಿ ನಡೆದ ಮೇಲ್ಮನೆಯ ಪಕ್ಷದ ಸದಸ್ಯರ ಸಭೆಯಲ್ಲಿ ಈ ಸಂಬಂಧ ಸರ್ವಾನುಮತದ ನಿರ್ಣಯ ಕೈಗೊಳ್ಳಲಾಗಿದೆ.

ಮೇಲ್ಮನೆಯ ಹಿರಿಯ ಸದಸ್ಯರಾಗಿರುವ ಬಸವರಾಜ ಹೊರಟ್ಟಿ ಅವರಿಗೆ ಈ ಬಾರಿ ಸಭಾಪತಿ ಸ್ಥಾನ ಸಿಗಲೇಬೇಕು. ಆ ನಿಟ್ಟಿನಲ್ಲಿ ಈಗಾಗಲೇ ಪ್ರಧಾನಿ ಮೋದಿ ಹಾಗೂ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರೊಂದಿಗೆ ತಾವು ಮಾತುಕತೆ ನಡೆಸಿದ್ದು ಅಗತ್ಯಬಿದ್ದರೆ ತಾವೇ ಖುದ್ದಾಗಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರನ್ನು ಭೇಟಿ ಮಾಡಿ ಮನವಿ ಮಾಡುವುದಾಗಿ ಸಭೆಯಲ್ಲಿ ದೇವೇಗೌಡರು ಘೋಷಿಸಿದ್ದಾರೆಂದು ತಿಳಿದುಬಂದಿದೆ.

ಮೇಲ್ಮನೆಯ ಉಪಸಭಾಪತಿ ಸ್ಥಾನವನ್ನು ಬಿಜೆಪಿಗೆ ಬಿಟ್ಟುಕೊಟ್ಟು ಸಭಾಪತಿ ಸ್ಥಾನವನ್ನು ಜೆಡಿಎಸ್‌ಗೆ ದಕ್ಕಿಸಿಕೊಳ್ಳಲು ಗೌಡರ ಚಿಂತನಾ ಸಭೆ ನಿರ್ಣಯ ಕೈಗೊಂಡಿರುವ ಹಿನ್ನೆಲೆಯಲ್ಲಿ ಬಸವರಾಜ ಹೊರಟ್ಟಿ ಅವರಿಗೆ ಮೇಲ್ಮನೆಯ ಸಭಾಪತಿ ಸ್ಥಾನ ಒಲಿಯುವುದು ಖಚಿತವಾದಂತಾಗಿದೆ.